# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 410
ಸದಸ್ಯರ ಹೆಸರು : ಶ್ರೀ ಸಿ.ಟಿ ರವಿ
ಉತ್ತರಿಸಬೇಕಾದ ದಿನಾಂಕ : 12.12.2024
ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ | ಬೇಲೂರು ತಾಲ್ಲೂಕು, ಹಳೇಬೀಡು ಹಾಗೂ ಚಿಕ್ಕಮಗಳೂರು ತಾಲ್ಲೂಕಿನ ಬೆಳವಾಡಿ ಕೆರೆ ತುಂಬಿಸುವ ರಣಘಟ್ಟ ಯೋಜನೆ ಮಂಜೂರಾಗಿದ್ದು ಯಾವಾಗ; ಈ ಯೋಜನೆಯ ಅಂದಾಜು ಮೊತ್ತವೆಷ್ಟು; | ಹಾಸನ ಜಿಲ್ಲೆಯ ಬೇಲೂರು ತಾಲ್ಲೂಕಿನ ದ್ವಾರಸಮುದ್ರ ಮತ್ತು ಇತರೆ 06 ಕೆರೆಗಳನ್ನು ಹಾಗೂ ಚಿಕ್ಕಮಗಳೂರು ತಾಲ್ಲೂಕಿನ ಬೆಳವಾಡಿ ಕೆರೆಯನ್ನು ರಣಘಟ್ಟ Pickup Weir ತಿರುವಿನಿಂದ ಕೆರೆ ತುಂಬಿಸುವ ಕಾಮಗಾರಿಯ (ರಣಘಟ್ಟ ಕುಡಿಯುವ ನೀರಿನ ಯೋಜನೆ) ರೂ.125.46 ಕೋಟಿ ಮೊತ್ತದ ವಿವರವಾದ ಯೋಜನಾ ವರದಿಗೆ ದಿನಾಂಕ:11.01.2021 ರಂದು ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ. |
| ಆ) | ಯೋಜನೆಯಡಿ ಎಷ್ಟು ಕೆರೆಗಳನ್ನು ತುಂಬಿಸಲು ಉದ್ದೇಶಿಸಲಾಗಿದೆ; ಈ ಯೋಜನೆ ಪ್ರಾರಂಭವಾಗಿದ್ದು ಯಾವಾಗ; | ಈ ಯೋಜನೆಯಿಂದ ಬೇಲೂರು ಹಾಗೂ ಚಿಕ್ಕಮಗಳೂರು ತಾಲ್ಲೂಕಿನ ಒಟ್ಟು 8 ಕೆರೆಗಳನ್ನು (ಒಟ್ಟು 280.82 ಎಂ.ಸಿ.ಎಫ್.ಟಿ. ಸಾಮರ್ಥ್ಯ) ತುಂಬಿಸಲು ಯೋಜಿಸಲಾಗಿದ್ದು, ಕಾಮಗಾರಿಯನ್ನು ದಿನಾಂಕ:22.01.2022 ರಂದು ಪ್ರಾರಂಭಿಸಲಾಗಿರುತ್ತದೆ. |
| ಇ) | ಯೋಜನೆ ಗುತ್ತಿಗೆ ಪಡೆದಿರುವ ಸಂಸ್ಥೆ ಯಾವುದು; ಗುತ್ತಿಗೆ ಕರಾರಿನನ್ವಯ ಕಾಮಗಾರಿ ಯಾವಾಗ ಪೂರ್ಣಗೊಳ್ಳಬೇಕು; ಪ್ರಸ್ತುತ ಕಾಮಗಾರಿ ಯಾವ ಹಂತದಲ್ಲಿದೆ; | ಈ ಯೋಜನೆಯ ಗುತ್ತಿಗೆಯನ್ನು ಮೆ॥ ಬಿ.ಎಸ್.ಆರ್. ಇನ್ಫ್ರಾಟೆಕ್ ಇಂಡಿಯಾ ಲಿಮಿಟೆಡ್ ಇವರಿಗೆ ದಿನಾಂಕ:30.07.2021 ರಂದು ವಹಿಸಲಾಗಿದ್ದು, ಮೂಲ ಕರಾರಿನಂತೆ ದಿನಾಂಕ:11.08.2023 ರೊಳಗೆ ಪೂರ್ಣಗೊಳಿಸಬೇಕಾಗಿರುತ್ತದೆ. ಮುಂದುವರೆದು, ಅನುಮೋದಿತ ಅವಧಿ ವಿಸ್ತರಣೆಯಂತೆ ದಿನಾಂಕ:11.08.2025 ರೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸಲು ಯೋಜಿಸಲಾಗಿದೆ.<br>ಕಾಮಗಾರಿಯ ಭೌತಿಕ ಪ್ರಗತಿಯ ವಿವರಗಳು ಈ ಕೆಳಗಿನಂತಿವೆ:<br>• **ತೆರೆದ ಗುರುತ್ವ ನಾಲೆ (From Ch: 0.00 Km to 3.42 Km):** ಒಟ್ಟು 3.42 ಕಿ.ಮೀ ಉದ್ದದ ನಾಲೆಯ ಪೈಕಿ 0.47 ಕಿ.ಮೀ ಉದ್ದದ ನಾಲೆಯ ಕಾಮಗಾರಿಯು ಪೂರ್ಣಗೊಂಡಿರುತ್ತದೆ.<br>• **ಗುರುತ್ವ ಸುರಂಗ (From Ch: 3.42 Km to 8.58 Km):** ಒಟ್ಟು 5.16 ಕಿ.ಮೀ ಉದ್ದದ ಸುರಂಗ ಕಾಮಗಾರಿಯ ಪೈಕಿ 4.030 ಕಿ.ಮೀ ಉದ್ದದ ಸುರಂಗ ಅಗೆತದ ಕಾಮಗಾರಿಯು ಪೂರ್ಣಗೊಂಡಿರುತ್ತದೆ. 115.00 ಮೀ ನ ಸುರಂಗ ಲೈನಿಂಗ್ ಕಾಮಗಾರಿ ಪೂರ್ಣಗೊಂಡಿರುತ್ತದೆ.<br>• **ತೆರೆದ ಗುರುತ್ವ ನಾಲೆ (From Ch: 8.58 Km to 9.262 Km):** ಒಟ್ಟು 0.682 ಕಿ.ಮೀ ಉದ್ದದ ನಾಲೆಯ ಕಾಮಗಾರಿಯನ್ನು ಪ್ರಾರಂಭಿಸಬೇಕಿರುತ್ತದೆ. |
| ಈ) | ಬಾಕಿ ಇರುವ ಕಾಮಗಾರಿಯನ್ನು ಯಾವಾಗ ಪೂರ್ಣಗೊಳಿಸಿ ಕೆರೆಗಳಿಗೆ ನೀರು ತುಂಬಿಸಲಾಗುವುದು? | ಈ ಯೋಜನೆಯ ಕಾಮಗಾರಿಗಳನ್ನು ದಿನಾಂಕ:11.08.2025 ರೊಳಗೆ ಪೂರ್ಣಗೊಳಿಸಿ ಕೆರೆಗಳಿಗೆ ನೀರು ತುಂಬಿಸಲು ಕ್ರಮವಹಿಸಲಾಗುತ್ತಿದೆ. |

ಕಡತ ಸಂ : ಜಸಂಇ 53 ಎನ್‌ಎಲ್‌ಎ 2024

(ಡಿ.ಕೆ. ಶಿವಕುಮಾರ್)
ಉಪ ಮುಖ್ಯಮಂತ್ರಿಗಳು